**ದಿನಾಂಕಃ 3-4-2019 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟಿಸವಾಲು ಃ ಶ್ರೀ ಎಸ್ ವಿ ಆರ್ ವಕೀಲರಿಂದ**

ಪ್ರತಿವಾದಿಯು ದಾವಾ ಆಸ್ತಿಯಲ್ಲಿ ಬಂಡೆನಿಲ್ಲಿಸಿ ಷೆಡ್‌ನಿರ್ಮಿಸಿರುತ್ತಾರೆ. ಪ್ರತಿವಾದಿಯು ಅದರಲ್ಲೇ ವಾಸವಿರುತ್ತಾರೆ ಎಂದರೆ ಸರಿ. ಪ್ರತಿವಾದಿಗಳು ಅಲ್ಲಿ ಸುಮಾರು 12 ವರ್ಷಗಳಿಂದ ವಾಸವಿರುತ್ತಾರೆ. ನಾವು ಅಗ್ರಿಮೆಂಟ್ ಮಾಡಿಕೊಡುವ ಮೊದಲು ಪ್ರತಿವಾದಿಗಳು ವಾಸವಿರುತ್ತಾರೋ ಅಥವಾ ನಂತರವೋ ಎಂದರೆ ಸಾಕ್ಷಿಯು ನಾವು ಅವರಿಗೆ ಯಾವುದೇ ಕರಾರು ಬರೆದುಕೊಟ್ಟಿರುವುದಿಲ್ಲ ಎಂದು ನುಡಿದಿರುತ್ತಾರೆ. ಪ್ರತಿವಾದಿಗಳಿಗೆ ಜಮೀನನ್ನು ಮಾರಾಟ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಮಗಳಿಗೆ ಮೋಸ ಮಾಡುವ ಉದ್ದೇಶದಿಂದ ನಾನು ಮತ್ತು ನನ್ನ ಮಕ್ಕಳು ಸುಳ್ಳು ನುಡಿಯುತ್ತಿದ್ದೇವೆ ಎಂದರೆ ಸರಿಯಲ್ಲ. ನಾವು ಪ್ರತಿವಾದಿಗೆ ಕರಾರು ಪತ್ರ ಬರೆದುಕೊಟ್ಟಿದ್ದರೂ ಸಹ ಇಲ್ಲ ಎಂದು ಈಗ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ**

**ಪಿ.ಸಿ.ಜೆ., ಪಾವಗಡ.**